For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.05/2024–25 ದಿನಾಂಕ:05.01.2026

ಪ್ರಕಟಣೆ

ಸರ್ಕಾರದ ವಿವಿಧ ಇಲಾಖೆ/ ಸಂಸ್ಥೆ/ನಿಗಮ/ಮಂಡಳಿಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಕನ್ನಡ ಭಾಷಾ ಪರೀಕ್ಷೆಯ ಅಂತಿಮ ಅಂಕ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸರ್ಕಾರದ ವಿವಿಧ ಇಲಾಖೆ/ಸಂಸ್ಥೆ/ನಿಗಮ/ ಮಂಡಳಿಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 28.12.2025 ರಂದು ನಡೆಸಿದ ಕನ್ನಡ ಭಾಷಾ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 28.12.2025 ರಂದು ಪ್ರಕಟಿಸಿ ದಿನಾಂಕ 30.12.2025 ಬೆಳಿಗ್ಗೆ 11.00 ಘಂಟೆಯೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಅದರಂತೆ ದಿನಾಂಕ 01.01.2026 ರಂದು ವಿಷಯ ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಅಂತಿಮ ಕೀ ಉತ್ತರಗಳನ್ನು ಮತ್ತು ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸಿ ದಿನಾಂಕ 02.01.2026 ಸಂಜೆ 05.00 ರೊಳಗೆ ನಿಗದಿತ ಲಿಂಕ್ ಮೂಲಕ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಅದರಂತೆ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಅಂಕ ಪಟ್ಟಿಗೆ ಸಲ್ಲಿಸಲಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಅಂಕ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ; ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ; ಎಸ್.ಎಸ್.ಎಲ್.ಸಿ ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ, ಅಥವಾ; ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ, ಅಥವಾ; ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿರುವುದಾಗಿ ಅರ್ಜಿಯಲ್ಲಿ ನಮೂದಿಸಿದ ಅಭ್ಯರ್ಥಿಗಳು ಮತ್ತು ದಿನಾಂಕ 28.12.2025 ರಂದು ಪ್ರಾಧಿಕಾರದಿಂದ ನಡೆಸಲಾದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳನ್ನು ಹೊರತು ಪಡಿಸಿ, **ದಿನಾಂಕ 28.12.2025ರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಗೈರು ಹಾಜರಾದ ಹಾಗೂ ಅನುತ್ತೀರ್ಣರಾದ ಅಭ್ಯರ್ಥಿಗಳನ್ನು ಪ್ರಸ್ತುತ ಅಧಿಸೂಚಿತ ಹುದ್ದೆಗಳಿಗೆ ನಡೆಲಾಗಿರುವ ಹಾಗೂ ಈ ಅಧಿಸೂಚನೆಯ ಹುದ್ದೆಗಳಿಗೆ ಮುಂದಿನ ದಿನಗಳಲ್ಲಿ ನಡೆಸಲ್ಪಡುವ ಸ್ಪರ್ಧಾತ್ಮಕ ಪರೀಕ್ಷೆಗಳಿಂದ ಕೈಬಿಡಲಾಗುವುದು.**

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in